# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತನೆಯ ಅಧಿವೇಶನ**

**ಕಾರ್ಯಕಲಾಪಗಳ ಪಟ್ಟಿ**

**ಬುಧವಾರ, ದಿನಾಂಕ: 18ನೇ ಮಾರ್ಚ್, 2020**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

## 01. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಅ) ಮಾನ್ಯ ಸದಸ್ಯರುಗಳಿಗೆ ಈಗಾಗಲೇ ಒದಗಿಸಲಾಗಿರುವ ಮೂರನೇ ಮತ್ತು ನಾಲ್ಕನೇ ಪಟ್ಟಿಯ ರೀತ್ಯಾ.

ಆ) **ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಕಾರ್ಯದರ್ಶಿಯವರು ಸಭೆಯ ಮುಂದಿಡುವುದು.**

01. ಕರ್ನಾಟಕ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) ವಿಧೇಯಕ, 2020
02. ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕ, 2020
03. ಕರ್ನಾಟಕ ಉನ್ನತ ಶೈಕ್ಷಣಿಕ ಸಂಸ್ಥೆಗಳಲ್ಲಿ ಶಿಕ್ಷಕರ ವೇತನ ಮತ್ತು ನಿವೃತ್ತಿ ವೇತನದ ನಿಯಂತ್ರಣ ವಿಧೇಯಕ, 2020

## 02. ವರದಿಗಳನ್ನೊಪ್ಪಿಸುವುದು

ಅ) **ಶ್ರೀ ಎಸ್.ಎಲ್.ಧರ್ಮೇಗೌಡ (ಅಧ್ಯಕ್ಷರು, ಅರ್ಜಿಗಳ ಸಮಿತಿ)** ಅವರು ಕರ್ನಾಟಕ ವಿಧಾನ ಪರಿಷತ್ತಿನ ಅರ್ಜಿಗಳ ಸಮಿತಿಯ 27ನೇ ವರದಿಯನ್ನು ಒಪ್ಪಿಸುವುದು.

ಆ) **ಶ್ರೀ ಸಿ.ಎಂ.ಲಿಂಗಪ್ಪ** (ಸದಸ್ಯರು, ಸಭೆಯ ಮುಂದಿಡಲಾದ ಕಾಗದ ಪತ್ರಗಳ ಸಮಿತಿ) ಅವರು **ಕರ್ನಾಟಕ ವಿಧಾನ ಮಂಡಲದ ಸಭೆಯ ಮುಂದಿಡಲಾದ ಕಾಗದ ಪತ್ರಗಳ ಸಮಿತಿಯ** 35ನೇ ವರದಿಯನ್ನು ಒಪ್ಪಿಸುವುದು.

## 03. ವಿತ್ತೀಯ ಕಾರ್ಯಕಲಾಪ

**ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು)** ಅವರು, 2019-2020ನೇ ಸಾಲಿನ ಪೂರಕ ಅಂದಾಜುಗಳನ್ನು (ಮೂರನೇ ಹಾಗೂ ಅಂತಿಮ ಕಂತು) ಮಂಡಿಸುವುದು.

## 04. ಭಾರತ ಸಂವಿಧಾನದ ಮೇಲಿನ ವಿಶೇಷ ಚರ್ಚೆ (ಏಳನೇ ದಿನ)

## ೦5. ಪ್ರಶ್ನೋತ್ತರ

| | | | |
|---|---|---|---|
| ಅ. | ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು | : | ಹನ್ನೆರಡನೆಯ ಪಟ್ಟಿ |
| ಆ. | **ತಡೆಹಿಡಿಯಲಾದ ಪ್ರಶ್ನೆ:**<br>7ನೇ ಪಟ್ಟಿಯಿಂದ ತಡೆಹಿಡಿಯಲಾದ<br>**ಶ್ರೀ ಯು.ಬಿ.ವೆಂಕಟೇಶ್** ಅವರ ಚುಕ್ಕೆ ಗುರುತಿನ<br>ಪ್ರಶ್ನೆ ಸಂಖ್ಯೆ: 94 (634) | : | ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಹಾಗೂ ಸಮಾಜ ಕಲ್ಯಾಣ ಸಚಿವರು |
| ಇ. | ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು | : | ಹನ್ನೆರಡನೆಯ ಪಟ್ಟಿ |

## ೦6. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

**೦1. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) ವಿಧೇಯಕ, 2020**

**ಶ್ರೀ ಎಸ್. ಸುರೇಶ್ ಕುಮಾರ್ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು)** ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ "**ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) ವಿಧೇಯಕವನ್ನು** ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**೦2. ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕ, 2020**

**ಶ್ರೀ ಬಿ.ಎಸ್. ಯಡಿಯೂರಪ್ಪ (ಮಾನ್ಯ ಮುಖ್ಯಮಂತ್ರಿಗಳು)** ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ "**ಕರ್ನಾಟಕ ಲೋಕಾಯುಕ್ತ (ತಿದ್ದುಪಡಿ) ವಿಧೇಯಕ**" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**೦3. ಕರ್ನಾಟಕ ಉನ್ನತ ಶೈಕ್ಷಣಿಕ ಸಂಸ್ಥೆಗಳಲ್ಲಿ ಶಿಕ್ಷಕರ ವೇತನ ಮತ್ತು ನಿವೃತ್ತಿ ವೇತನದ ನಿಯಂತ್ರಣ ವಿಧೇಯಕ, 2020**

**ಡಾ. ಅಶ್ವಥ್ ನಾರಾಯಣ್ ಸಿ.ಎನ್.** (ಮಾನ್ಯ ಉಪ ಮುಖ್ಯಮಂತ್ರಿ ಮತ್ತು ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ, ಉದ್ಯಮ ಶೀಲತೆ ಮತ್ತು ಜೀವನೋಪಾಯ ಸಚಿವರು) ಅವರು:-

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2020ನೇ ಸಾಲಿನ "**ಕರ್ನಾಟಕ ಉನ್ನತ ಶೈಕ್ಷಣಿಕ ಸಂಸ್ಥೆಗಳಲ್ಲಿ ಶಿಕ್ಷಕರ ವೇತನ ಮತ್ತು ನಿವೃತ್ತಿ ವೇತನದ ನಿಯಂತ್ರಣ ವಿಧೇಯಕ**" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## ೦೭. ವಿತ್ತೀಯ ಕಾರ್ಯಕಲಾಪ

೨೦೨೦-೨೧ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲಿನ ಸಾಮಾನ್ಯ ಚರ್ಚೆ

## ೦೮. ಗಮನ ಸೆಳೆಯುವ ಸೂಚನೆಗಳು

ಅ) **ಶ್ರೀ ಮರಿತಿಬ್ಬೇಗೌಡ, ಶ್ರೀ ಪುಟ್ಟಣ್ಣ ಹಾಗೂ ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ** ಅವರುಗಳು ಬಿ.ಬಿ.ಎಂ.ಪಿ. ವ್ಯಾಪ್ತಿಯಲ್ಲಿ ಶಿವಾಜಿನಗರದಿಂದ ನಾಗವಾರದವರೆಗೆ ಕೈಗೊಂಡಿರುವ ಮೆಟ್ರೋ ೨ನೇ ಹಂತದ ಕಾಮಗಾರಿಯಲ್ಲಿ ಮಾರ್ಗ ನಿರ್ಮಾಣಕ್ಕಾಗಿ ಭೂಸ್ವಾಧಿನ ಪಡಿಸಿಕೊಂಡ ಭೂ ಮಾಲೀಕರುಗಳಿಗೆ ಪರಿಹಾರ ನೀಡದಿರುವ ಬಗ್ಗೆ ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ಗಮನ ಸೆಳೆಯುವುದು.

ಆ) **ಡಾ. ವೈ.ಎ. ನಾರಾಯಣಸ್ವಾಮಿ** ಅವರು ರಾಜ್ಯ ಸರ್ಕಾರಿ ನೌಕರರಿಗೆ ವಸತಿ ಗೃಹ ಹಂಚಿಕೆ ಮಾಡುವ ಹಾಗೂ ಹಂಚಿಕೆಯಲ್ಲಿರುವ ನ್ಯೂನ್ಯತೆಗಳ ಕುರಿತು ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಹಾಗೂ ಸಮಾಜ ಕಲ್ಯಾಣ ಸಚಿವರ ಗಮನ ಸೆಳೆಯುವುದು.

## ೦೯. ನಿಯಮ ೩೩೦ರ ಮೇರೆಗೆ

**ಅ) ಮಾನ್ಯ ವಿರೋಧ ಪಕ್ಷದ ನಾಯಕರಾದ ಶ್ರೀ ಎಸ್.ಆರ್. ಪಾಟೀಲ್ ಹಾಗೂ ಶ್ರೀಯುತರುಗಳಾದ ಕೆ.ಟಿ. ಶ್ರೀಕಂಠೇಗೌಡ, ಐವನ್ ಡಿ'ಸೋಜಾ, ಆರ್.ಬಿ. ತಿಮ್ಮಾಪೂರ, ಪಿ.ಆರ್. ರಮೇಶ್** ಹಾಗೂ ಇತರರು ರಾಜ್ಯದಲ್ಲಿ ದಿನನಿತ್ಯ ಉಪಯೋಗಿಸುವ ಆಹಾರ ಪದಾರ್ಥಗಳಲ್ಲಿ ರಾಸಾಯನಿಕ ಮಿಶ್ರಿತ ಕಲಬೆರಕೆ ಹೆಚ್ಚಾಗಿ ಜನಸಾಮಾನ್ಯರ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗುತ್ತಿರುವ ಬಗ್ಗೆ ಪ್ರಸ್ತಾಪಿಸುವುದು.

**ಆ) ಶ್ರೀ ಎಂ.ಸಿ ವೇಣುಗೋಪಾಲ್** ಅವರು ಉಡುಪಿ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಸಮುದಾಯ ಭವನಗಳ ನಿರ್ಮಾಣಕ್ಕಾಗಿ ಬಿಡುಗಡೆಯಾಗಿರುವ ಅನುದಾನದಲ್ಲಿ ಅವ್ಯವಹಾರ ನಡೆದಿರುವ ಬಗ್ಗೆ ಪ್ರಸ್ತಾಪಿಸುವುದು.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council.htm**